For More Job News Visit : www.kpscvaani.com

ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001
ದೂರವಾಣಿ ಸಂಖ್ಯೆ:080-22342163, E-mail: nrega@karnataka.gov.in

ಸಂಖ್ಯೆ: ಗ್ರಾಅಪ:90:ಉಖಾಯೋ:2020 ದಿನಾಂಕ:13.08.2020

ಪತ್ರಿಕಾ ಪ್ರಕಟಣೆ

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದ ಸಂಬಂಧದಲ್ಲಿ ಸ್ವೀಕೃತವಾಗುವ ದೂರುಗಳ ವಿಲೇವಾರಿ ಮತ್ತು ಕುಂದುಕೊರತೆ ನಿವಾರಣೆಗಾಗಿ ಈ ಕೆಳಕಂಡ ಜಿಲ್ಲೆಗಳಿಗೆ ಒಂಬುಡ್ಸ್‌ಮನ್‌ರವರನ್ನು **Walk-in-interview** ಮೂಲಕ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಂಬುಡ್ಸ್‌ಮನ್ ಹುದ್ದೆಗಳಿರುವ ಜಿಲ್ಲೆಗಳು: **ಬಳ್ಳಾರಿ, ಹಾವೇರಿ, ಕಲಬುರಗಿ ಮತ್ತು ಕೋಲಾರ.**

ಅರ್ಹತೆಗಳು:

1. ಈ ಕೆಳಕಂಡ ಯಾವುದಾದರೊಂದು ಕ್ಷೇತ್ರದಲ್ಲಿ ಕಡೆಯ ಪಕ್ಷ **10 ವರ್ಷಗಳ ಸೇವಾನುಭವ** ಹೊಂದಿರಬೇಕಾಗಿರುತ್ತದೆ.
   ಅ) ಸಾರ್ವಜನಿಕ ಆಡಳಿತ
   ಆ) ಕಾನೂನು
   ಇ) ಶೈಕ್ಷಣಿಕ ಕ್ಷೇತ್ರ
   ಈ) ಸಮಾಜ ಸೇವೆ/ಮ್ಯಾನೇಜ್‌ಮೆಂಟ್
2. ಸಾರ್ವಜನಿಕರೊಂದಿಗೆ/ಸಮುದಾಯದ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸಿದ ಅನುಭವವು ಕಡ್ಡಾಯ ಅರ್ಹತೆಯಾಗಿರುತ್ತದೆ.
3. ಅರ್ಜಿ ಸಲ್ಲಿಸುವವರು ಯಾವುದೇ ರಾಜಕೀಯ ಪಕ್ಷದ ಮತ್ತು ನಿಷೇಧಿತ ಸಂಘ ಸಂಸ್ಥೆಯ ಸದಸ್ಯರಾಗಿರಬಾರದು.
4. ಕಾಮಗಾರಿ ತಪಾಸಣೆ, ಕ್ಷೇತ್ರ ಭೇಟಿ/ ವೀಕ್ಷಣೆ ಕೆಲಸಗಳಿಗೆ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಳ್ಳಲು ಸಮರ್ಥರಿರಬೇಕು.
5. ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಗರಿಷ್ಠ ವಯಸ್ಸು 66 ವರ್ಷಗಳನ್ನು ಮೀರಿರಬಾರದು.
6. ನೇಮಕಾತಿಯು ಮೊದಲಿಗೆ 2 ವರ್ಷಗಳ ಅವಧಿಯದಾಗಿರುತ್ತದೆ. ಆದರೆ ಕಾರ್ಯನಿರ್ವಹಣೆಯು ಅತೃಪ್ತಿಕರವಾಗಿ ಕಂಡು ಬಂದಲ್ಲಿ ಅವಧಿಗೆ ಮುನ್ನವೇ ಹುದ್ದೆಯಿಂದ ಬಿಡುಗಡೆ ಮಾಡಲಾಗುವುದು.
7. ಕೇಂದ್ರ/ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳ ಅನುಸಾರ ಸಂಭಾವನೆ, ಸಿಟ್ಟಿಂಗ್ ಫೀಜು ನೀಡಲಾಗುವುದು. ಪ್ರಸ್ತುತ ಮಾಸಿಕ ರೂ.10000/- ಗೌರವಧನ ಹಾಗೂ ಪ್ರತಿ ಸಿಟ್ಟಿಂಗ್‌ಗೆ ರೂ.1000/- ದಂತೆ ಗರಿಷ್ಠ ರೂ.20000/- ಗಳ ಮಿತಿಗೊಳಪಟ್ಟು ಸಿಟ್ಟಿಂಗ್ ಫೀಜು ನೀಡಲಾಗುತ್ತಿದೆ.

ಜಿಲ್ಲಾ ಮಟ್ಟದಲ್ಲಿ ಒಂಬುಡ್ಸ್‌ಮನ್‌ಗಳಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು ಇಲಾಖೆಯ ವೆಬ್‌ಸೈಟ್ www.rdpr.karnataka.gov.in ನಲ್ಲಿ ನಿಗಧಿತ ಅರ್ಜಿನಮೂನೆಯನ್ನು ಅವರೋಹಣ (download) ಮಾಡಿಕೊಂಡು, ತಮ್ಮ ವ್ಯಕ್ತಿತ್ವ ಪರಿಚಯದ, ಕನಿಷ್ಠ 10 ವರ್ಷಗಳ ಕಾರ್ಯನಿರ್ವಹಣೆ ಅನುಭವದ ಮಾಹಿತಿಗೆ ಪೂರಕವಾದ ದಾಖಲೆಗಳೊಂದಿಗೆ ದಿ:05.09.2020 ರೊಳಗಾಗಿ Email:nrega@karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸುವುದು. ಸಲ್ಲಿಸಲಾದ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ನೇಮಕಾತಿಯ ವಿವರಗಳು, ಅರ್ಹತೆ, ಅರ್ಜಿ ನಮೂನೆಗಳಿಗಾಗಿ www.rdpr.karnataka.gov.in ಅನ್ನು ನೋಡುವುದು. ನಿಗಧಿ ಪಡಿಸಿದ ದಿನಾಂಕದ ನಂತರ ಸ್ವೀಕೃತವಾಗುವ ಅಥವಾ ಅಪೂರ್ಣ ಮಾಹಿತಿ ಹೊಂದಿರುವ ಅರ್ಜಿಗಳು ಪರಿಗಣಿಸಲ್ಪಡುವುದಿಲ್ಲ. (ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರನ್ನು ಸಂಪರ್ಕಿಸಬಹುದಾಗಿದೆ, (ದೂರವಾಣಿಸಂಖ್ಯೆ:080-22342163).

ಆಯುಕ್ತರು ಗ್ರಾಮೀಣಾಭವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

For More Job News Visit : www.kpscvaani.com

ಇ-ಮೇಲ್

(ಭಾವಚಿತ್ರ)

ಒಂಬುಡ್ಸ್‌ಮನ್ ನೇಮಕಾತಿಯ ಅರ್ಜಿ ನಮೂನೆ:

1	ವೈಯಕ್ತಿಕ ಮಾಹಿತಿ ವಿವರ :	
1.1	ಹೆಸರು :	
1.2	ವಯಸ್ಸು : (05.09.2020 ದಿನಾಂಕದಲ್ಲಿದ್ದಂತೆ) (ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
1.3	ಅಂಚೆ ವಿಳಾಸ ಅಥವಾ ಪತ್ರ ವ್ಯವಹಾರದ ವಿಳಾಸ:	
1.4	ಮೊಬೈಲ್ ಸಂಖ್ಯೆ/ಇ-ಮೇಲ್ ಐಡಿ:	
1.5	ಖಾಯಂ ವಿಳಾಸ : ವಾಸಸ್ಥಳದ ರುಜುವಾತು ದಾಖಲಾತಿಯನ್ನು ಲಗತ್ತಿಸುವುದು)	
1.6	ಅ) ಕ್ರಿಮಿನಲ್ ಪ್ರಕರಣದಲ್ಲಿ ಶಿಕ್ಷೆಗೊಳಗಾಗಿದ್ದೀರಾ/ಆರೋಪ ಪಟ್ಟಿ ದಾಖಲಾಗಿದೆಯೇ ? ಆ) ಇಲಾಖಾ ವಿಚಾರಣೆಯಲ್ಲಿ ದಂಡನೆಗೆ ಒಳಪಟ್ಟಿರುವಿರೇ?/ಯಾವುದೇ ಇಲಾಖಾ ವಿಚಾರಣೆ ಬಾಕಿ ಇದೆಯೇ?	ಹೌದಾದಲ್ಲಿ ವಿವರ ನೀಡುವುದು
1.7	ಯಾವುದೇ ಸಾಮರ್ಥ್ಯದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಹೊಣೆಗಾರಿಕೆ ಹೊಂದಿರುವಿರಾ?	ಹೌದು/ಇಲ್ಲ
2	ವೃತ್ತಿ ಪರ ಮಾಹಿತಿ ವಿವರ :	
2.1	ಉನ್ನತ ವಿದ್ಯಾರ್ಹತೆ : (ಕನಿಷ್ಠ ವಿದ್ಯಾರ್ಹತೆ: ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವೀಧರರಾಗಿರತಕ್ಕದ್ದು)	
2.2	ಎಷ್ಟು ವರ್ಷಗಳ ಕೆಲಸದ ಅನುಭವವಿದೆ: ವಿವರ ನೀಡುವುದು	
2.3	ಕ್ಷೇತ್ರ ಮಟ್ಟದ ಅನುಭವ: ಈ ಕೆಳಕಂಡ ಯಾವುದಾದರು ಒಂದು ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿರುವ ಅನುಭವ ಇರತಕ್ಕದ್ದು. ಈ ಕುರಿತು ವಿವರವಾದ ಟಿಪ್ಪಣಿ ಹಾಗೂ ಕಾರ್ಯನಿರ್ವಹಿಸಿದ ಅನುಭವಕ್ಕೆ ಸಂಬಂಧಿಸಿದ ವಿವರಗಳನ್ನು ನೀಡುವುದು. (ಅ) ಸಾರ್ವಜನಿಕ ಆಡಳಿತ (ಆ) ಕಾನೂನು (ಇ) ಶೈಕ್ಷಣಿಕ ಸೇವೆ (ಈ) ಸಮಾಜ ಸೇವೆ /ಮ್ಯಾನೇಜಮೆಂಟ್	
2.4	ಈ ಹಿಂದೆ ಕಾರ್ಯನಿರ್ವಹಿಸಿದ್ದ ಗರಿಷ್ಠ ಹುದ್ದೆ/ಸ್ಥಾನ :	
2.5	ಯಾವುದಾದರೂ ಸೊಸೈಟಿ/ವೃತ್ತಿಕಾಯ ಸಂಸ್ಥೆಯ ಸದಸ್ಯರೇ?	ಹೌದಾದಲ್ಲಿ ವಿವರಗಳನ್ನು ನೀಡುವುದು :
2.6	ನೇಮಕಾತಿ ಬಯಸುವ ಜಿಲ್ಲೆ: ಆದ್ಯತೆ ನಮೂದಿಸುವುದು (ಸಮಿತಿಯ ನಿರ್ಣಯವೇ ಅಂತಿಮ)	1) 2) 3) 4)---
3	ಸ್ವಯಂ ಘೋಷಣೆ:	

ಮೇಲೆ ಸಲ್ಲಿಸಿರುವ ಮಾಹಿತಿಯು ಸರಿಯಾಗಿದೆಯೆಂದು ಹಾಗೂ ಅಧಿನಿಯಮದ ಪರಿಮಿತಿಯೊಳಗೆ ಮಹಾತ್ಮಗಾಂದಿ ನರೇಗಾ ಯೋಜನೆಯನ್ನು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ಕಾರ್ಯಾಚರಣೆ ಮಾರ್ಗಸೂಚಿಗಳನ್ವಯ ರೂಪಿಸಿರುವ ಎಲ್ಲಾ ಪ್ರಕಾರ್ಯಗಳನ್ನು ಹಾಗೂ ಒಂಬುಡ್ಸಮನ್ ಕುರಿತು ಜಾಹಿರಾತು ಮೂಲಕ ನೀಡಿರುವ ಸೂಚನೆಗಳನ್ನು ಮತ್ತು ಒಂಬುಡ್ಸಮನ್ ಹುದ್ದೆಯು ಅರೆಕಾಲಿಕ ಹುದ್ದೆಯಾಗಿರುವುದನ್ನು ಪೂರ್ಣವಾಗಿ ಅರ್ಥೈಸಿಕೊಂಡಿರುವೆನೆಂದು ಈ ಮೂಲಕ ಘೋಷಿಸಿರುತ್ತೇನೆ.

ದಿನಾಂಕ:
ಸ್ಥಳ:

ಅರ್ಜಿದಾರರ ಹೆಸರು ಮತ್ತು ಸಹಿ: